# ಗೆದ್ದು 2 ತಿಂಗಳ ಬಳಿಕ ಶಾಸಕ ರಿಜ್ವಾನ್ ಪ್ರಮಾಣ



ಉಪಚುನಾವಣೆಯಲ್ಲಿ ಶಿವಾಜಿನಗರ ಕ್ಷೇತ್ರದಿಂದ ಗೆಲುವು ಸಾಧಿಸಿದ ಕಾಂಗ್ರೆಸ್ ಪಕ್ಷದ ರಿಜ್ವಾನ್ ಅರ್ಷದ್ ಸೋಮವಾರ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು. ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಪ್ರತಿಜ್ಞಾ ವಿಧಿ ಬೋಧಿಸಿ, ಹೂಗುಚ್ಛ ನೀಡಿ ಅಭಿನಂದಿಸಿದರು.

**ಶಾಸಕರಾಗಿ ರಿಜ್ವಾನ್ ಪ್ರಮಾಣ...**

ಬೆಂಗಳೂರು: ಉಪಚುನಾವಣೆಯಲ್ಲಿ ಶಿವಾಜಿನಗರ ಕ್ಷೇತ್ರದಿಂದ ಗೆಲುವು ಸಾಧಿಸಿದ ಕಾಂಗ್ರೆಸ್ ಪಕ್ಷದ ರಿಜ್ವಾನ್ ಅರ್ಷದ್ ಅವರು ಎರಡು ತಿಂಗಳ ಬಳಿಕ ಶಾಸಕರಾಗಿ ಪ್ರಮಾಣ ವಚನ ಸ್ವೀಕರಿಸಿದರು.

ವಿಧಾನಸೌಧದ ಸಭಾಧ್ಯಕ್ಷರ ಕೊಠಡಿಯಲ್ಲಿ ಸೋಮವಾರ ನಡೆದ ಸರಳ ಕಾರ್ಯಕ್ರಮದಲ್ಲಿ ರಿಜ್ವಾದ್ ಅರ್ಷದ್ ಸತ್ಯ, ನಿಷ್ಠೆಯ ಹೆಸರಲ್ಲಿ ಪ್ರಮಾಣ ವಚನಸ್ವೀಕರಿಸಿದರು. ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆಕಾಗೇರಿ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು. ಬಳಿಕ ಸಭಾಧ್ಯಕ್ಷರು ಶಾಸಕ ರಿಜ್ವಾನ್ ಅರ್ಷದ್ ಅವರಿಗೆ ಹೂಗುಚ್ಛ ನೀಡಿ ಅಭಿನಂದಿಸಿದರು.

ಕೆಪಿಸಿಸಿ ಅಧ್ಯಕ್ಷ ದಿನೇಶ್ ಗುಂಡೂರಾವ್, ಮಾಜಿ ಸಚಿವ ಕೃಷ್ಣ ಬೈರೇಗೌಡ, ಶಾಸಕ ಎನ್.ಎ.ಹ್ಯಾರಿಸ್ ಹಾಗೂ ರಿಜ್ವಾನ್ ಅರ್ಷದ್ ಅವರ ಕುಟುಂಬದ ಸದಸ್ಯರು, ಬೆಂಬಲಿಗರು ಹಾಜರಿದ್ದರು. 2019ರ ಡಿಸೆಂಬರ್‌ನಲ್ಲಿ ಉಪ ಚುನಾವಣೆಯಲ್ಲಿ ಗೆಲುವು ಸಾಧಿಸಿದ ಶಾಸಕರು ಪ್ರಮಾಣವಚನ ಸ್ವೀಕರಿಸಿದ್ದರು. ಆದರೆ ರಿಜ್ವಾನ್ ಹಾಜರಾಗಿರಲಿಲ್ಲ. ಹೀಗಾಗಿ ಸೋಮವಾರ ಪ್ರಮಾಣ ವಚನ ಸ್ವೀಕರಿಸಿದರು.